ತುಮಕೂರು ಜಿಲ್ಲೆಯ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯಲ್ಲಿ ಪಡಿತರ ಹಂಚಿಕೆಯಲ್ಲಿ ಭ್ರಷ್ಟಾಚಾರ

2327(2875) ಶ್ರೀ ಚಿನ್ನಿಗಪ್ಪ ಸಿ. (ಕೊರಟಗೆರೆ) :— ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1. ತುಮಕೂರು ಜಿಲ್ಲೆಯ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯಲ್ಲಿ ಪಡಿತರ ಆಹಾರ ಧಾನ್ಯಗಳನ್ನು ಬಡ ನಾಗರೀಕ ಕುಟುಂಬಗಳಿಗೆ ಹಂಚಿಕೆ ಮಾಡದೇ ಅನ್ಯಾಯವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2. ಹಾಗಿದ್ದಲ್ಲಿ ಈ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಜವಾಬ್ದಾರಿಯುತ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಕ್ರಮವೇನು?

3. ಇದೇ ರೀತಿ ತಾಲ್ಲೂಕಿನಾದ್ಯಂತ ಅಕ್ರಮವೆಸಗಿರುವಂತಹ ಅಧಿಕಾರಿಗಳ ವಿರುದ್ಧ ಇದುವರೆವಿಗೂ ಕ್ರಮ ಕೈಗೊಳ್ಳದಿರಲು ಕಾರಣವೇನು?

4. ಇಂತಹ ಭ್ರಷ್ಟ ಅಧಿಕಾರಿಗಳ ವಿರುದ್ಧ ಕೂಡಲೇ ಕ್ರಮ ಕೈಗೊಂಡು ಬಡನಾಗರೀಕರಿಗೆ ಅನ್ಯಾಯವಾಗದಂತೆ ಅನುಕೂಲ ಮಾಡಿಕೊಡುವುದು ಯಾವಾಗ?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :—

1. ಹೌದು.

2. ಈಗಾಗಲೇ 16 ಜನ ಅಧಿಕಾರಿ : ನೌಕರರುಗಳನ್ನು ಅಮಾನತ್ತುಪಡಿಸಲಾಗಿದೆ. ಮತ್ತು ಇದೇ ಪ್ರಕರಣದ ಬಗ್ಗೆ ವಿವರವಾದ ತನಿಖೆಯ ಅವಶ್ಯಕತೆಯಿರುವುದನ್ನು ಮನಗಂಡು ಸಿ.ಓ.ಡಿ. ತನಿಖೆಗೆ ಸರ್ಕಾರ ತೀರ್ಮಾನಿಸಿದೆ.

3. ಇಂತಹ ಅಕ್ರಮ ಪ್ರಕರಣಗಳು ತಾಲ್ಲೂಕುಮಟ್ಟದಲ್ಲಿ ನಡೆಯುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

4. ಸಿ.ಓ.ಡಿ. ವರದಿ ಬಂದ ಕೂಡಲೇ ಅಧಿಕಾರಿ : ನೌಕರರುಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುತ್ತದೆ. ಪಡಿತರ ಚೀಟಿದಾರರುಗಳಿಗೆ ಆಹಾರ ಧಾನ್ಯಗಳ ವಿತರಣೆಯಲ್ಲಿ ಅನಾನುಕೂಲವಾಗದಂತೆ ವ್ಯವಸ್ಥೆ ಮಾಡಲಾಗಿದೆ.